1307 (1535) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) : ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಪು ವಿಧಾನಸಭಾ ಕ್ಷೇತ್ರಕ್ಕೆ ಯುವಜನಸೇವಾ ಇಲಾಖೆಯಿಂದ ಒಂದು ಕ್ರೀಡಾಂಗಣ ಮತ್ತು ಈಜುಕೊಳ ಮಂಜೂರಾತಿ ನೀಡಲಾಗುವುದೇ;

ಆ) ಇದರಿಂದ, ಗ್ರಾಮೀಣ ಭಾಗದ ಪ್ರತಿಭಾವಂತ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿದಂತಾಗುವುದಿಲ್ಲವೆ;

ಇ) ಗ್ರಾಮೀಣ ಭಾಗದಲ್ಲಿ ಕ್ರೀಡಾ ತರಬೇತಿದಾರರನ್ನು ನೇಮಿಸುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ?

ಶ್ರೀ ಹನುಮಂತಪ್ಪ ವೈ. ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು) :

ಅ) ಪ್ರಸ್ತುತ ಯುವಜನಸೇವಾ ಮತ್ತು ಕ್ರೀಡಾ ಇಲಾಖೆಯಲ್ಲಿ ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಿಸುವ ಯೋಜನೆ ಹಮ್ಮಿಕೊಂಡಿದ್ದು, ಕಾಪು ಹೋಬಳಿ ಕೇಂದ್ರ ಸ್ಥಾನವಾಗಿರುವುದರಿಂದ ಕ್ರೀಡಾಂಗಣ ಮತ್ತು ಈಜುಕೊಳ ಮಂಜೂರಾತಿ ಸದ್ಯಕ್ಕೆ ನೀಡಲಾಗುವುದಿಲ್ಲ.

ಆ) ಉಡುಪಿ ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಕ್ರೀಡಾಂಗಣ ನಿರ್ಮಿಸಿದ್ದು, ಗ್ರಾಮೀಣ ಭಾಗದ ಪ್ರತಿಭಾವಂತ ಕ್ರೀಡಾಪಟುಗಳ ಅಭ್ಯಾಸಕ್ಕಾಗಿ ಮುಕ್ತ ಅವಕಾಶ ಇರುತ್ತದೆ.

ಇ) ಸದ್ಯಕ್ಕಿಲ್ಲ.

1308 (1642) ಶ್ರೀ ಮಹಾಗುಂಡಪ್ಪ ಕಲ್ಲಪ್ಪ ಪಟ್ಟಣಶೆಟ್ಟಿ (ಬಾದಾಮಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಲಿಗೇರಿ ಗ್ರಾಮದಲ್ಲಿ 110 ಕೆ.ವಿ. ಸ್ಟೇಷನ್‌ಗಾಗಿ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿ ಇದೆ?

ಇ) ಕುಟರನಕೇರಿ, ಮುಷ್ಟಿಗೇರಿ, ಮುತ್ತಲಗೇರಿ, ಗೋಪನಕೊಪ್ಪ, ಹೆಬ್ಬಳ್ಳಿ ಗ್ರಾಮಗಳಿಗಾಗಿ 33 ಕೆ.ವಿ. ಸ್ಟೇಷನ್‌ಗಾಗಿ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿ ಇದೆ?

ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಮತ್ತು ಆ) ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯು ಹಾಲಗೇರಿ ಗ್ರಾಮದಲ್ಲಿ 33/11 ಕೆ.ವಿ. ವಿದ್ಯುತ್ ಉಪಕೇಂದ್ರದ ಸ್ಥಾಪನೆಗಾಗಿ ಈಗಾಗಲೇ ಕ್ರಮ ಕೈಗೊಂಡಿರುತ್ತದೆ. ಕಾಮಗಾರಿಯ ನಿರ್ವಹಣೆಗೆ ಟೆಂಡರ್ ಕರೆದಿರುತ್ತದೆ. ಆದುದರಿಂದ ಸದರೀ ಗ್ರಾಮದಲ್ಲಿ 110 ಕೆ.ವಿ. ಸ್ಥಾಪನೆಯ ಅವಶ್ಯಕತೆ ಸದ್ಯಕ್ಕೆ ಇರುವುದಿಲ್ಲ.

ಇ) ಹೌದು. ಈ ಬೇಡಿಕೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ಗಮನಕ್ಕೆ ಬಂದಿದೆ.

ಈ) ಈ ಬೇಡಿಕೆಯು ಪರಿಶೀಲನೆಯ ಹಂತದಲ್ಲಿದೆ.

1309 (1643) ಶ್ರೀ ಮಹಾಗುಂಡಪ್ಪ ಕಲ್ಲಪ್ಪ ಪಟ್ಟಣಶೆಟ್ಟಿ (ಬಾದಾಮಿ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಂದಿಕೇಶ್ವರ ಹಾಗೂ ಬೇಲೂರ ಗ್ರಾಮಗಳಲ್ಲಿಯ 33 ಕೆ.ವಿ. ಸ್ಟೇಷನ್‌ಗಳ ಕಾಮಗಾರಿಗಳು ಯಾವಾಗ ಪ್ರಾರಂಭಿಸಲಾಯಿತು;

ಆ) ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸ ಲಾಗುವುದು?

ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ನಂದಿಕೇಶ್ವರ 33 ಕೆ.ವಿ. ಉಪ ವಿದ್ಯುತ್ ಕೇಂದ್ರದ ಕಾಮಗಾರಿಗಳನ್ನು ಡಿಸೆಂಬರ್–2004 ರಲ್ಲಿ ಪ್ರಾರಂಭಿಸಲಾಗಿದೆ.

ಬೇಲೂರು 33 ಕೆ.ವಿ. ವಿದ್ಯುತ್ ಉಪ ಕೇಂದ್ರದ ಕಾಮಗಾರಿಯನ್ನು ನವೆಂಬರ್ 2006ರಂದು ಪ್ರಾರಂಭಿಸಲಾಗಿದೆ.

ಆ) ನಂದಿಕೇಶ್ವರ ವಿದ್ಯುತ್ ಉಪ ಕೇಂದ್ರದ ಕಾಮಗಾರಿಗಳನ್ನು ಆಗಸ್ಟ್ 2007ರ ಅಂತ್ಯದೊಳಗೆ ಹಾಗೂ ಬೇಲೂರು ವಿದ್ಯುತ್ ಉಪ ಕೇಂದ್ರದ ಕಾಮಗಾರಿಗಳನ್ನು ಡಿಸೆಂಬರ್ 2007ರ ಅಂತ್ಯದೊಳಗೆ ಪೂರ್ಣಗೊಳಿಸಲು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯು ಉದ್ದೇಶಿಸಿದೆ.